ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕೆ.ಎಫ್.ಡಿ.ಸಿ. ಮೀನು ಕ್ಯಾಂಟೀನ್‌ನಲ್ಲಿ ಶುಚಿತ್ವ ಕಾಪಾಡದೇ ಇರುವ ಬಗ್ಗೆ

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –

45 (237) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ–

(ಅ) ಬೆಂಗಳೂರಿನ ಮುಖ್ಯ ಉದ್ಯಾನವನಗಳಲ್ಲೊಂದಾದ ಕಬ್ಬನ್ ಪಾರ್ಕ್‌ನಲ್ಲಿ ವಾಯುವಿಹಾರಕ್ಕೆಂದು ಬರುವ ಸಾರ್ವಜನಿಕರು ಹಾಗೂ ಹಿರಿಯ ನಾಗರೀಕರಿಗೆ ಅಲ್ಲಿರುವ ಕೆ.ಎಫ್.ಡಿ.ಸಿ. ಮೀನು ಕ್ಯಾಂಟೀನ್‌ನಲ್ಲಿ ಶುಚಿತ್ವ ಕಾಪಾಡದೆ ಉಳಿದ ತ್ಯಾಜ್ಯ ವಸ್ತುಗಳನ್ನು ವಿಲೇವಾರಿ ಮಾಡುತ್ತಿರುವುದರಿಂದ ಪರಿಸರ ಸ್ವಚ್ಛತೆ ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದಿಂದ ನಡೆಸುತ್ತಿರುವ ಕ್ಯಾಂಟೀನ್‌ಗಳಲ್ಲಿ ತ್ಯಾಜ್ಯ ವಿಲೇವಾರಿಗೆ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕ್ಯಾಂಟೀನ್ ಇರುವ ಸ್ಥಳ ಯಾರ ಹಕ್ಕಿನಲ್ಲಿದೆ ; ಬೇರೆಯವರ ಹೆಸರಿನಲ್ಲಿದ್ದರೆ ಅವರು ಲೋಕೋಪಯೋಗಿ ಇಲಾಖೆಯ ಎಸ್.ಆರ್. ಪ್ರಕಾರ ಬಾಡಿಗೆ ಪಾವತಿಸುತ್ತಿದ್ದಾರೆಯೇ ; ಪಾವತಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?